**Akashvani : Bangalore**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.04.2024 / 18.40 hrs**

ಮುಖ್ಯಾಂಶಗಳು

೧. ರಾಜ್ಯದಲ್ಲಿ ಮೊದಲ ಹಂತದ ಮತದಾನಕ್ಕೆ ಕ್ಷಣಗಣನೆ ; ನಾಳೆ ಸಂಜೆ ಬಹಿರಂಗ ಪ್ರಚಾರ ಅಂತ್ಯ

೨. ಚಿತ್ರದುರ್ಗದಲ್ಲಿ ಪ್ರಿಯಾಂಕಾ ಗಾಂಧಿ ಮತಯಾಚನೆ ; ಸಂಜೆ ಬೆಂಗಳೂರಿನಲ್ಲಿ ಅಮಿತ್ ಶಾ ರೋಡ್ ಶೋ

೩. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಆಯೋಗ ಸನ್ನದ್ಧ ; ಮತದಾನ ಹೆಚ್ಚಳಕ್ಕೆ ಜನಜಾಗೃತಿ

೪. ಇಂದು ರಾಜಧಾನಿಯಲ್ಲಿ ಐತಿಹಾಸಿಕ ಹೂವಿನ ಕರಗ - ಬೆಂಗಳೂರಿನಲ್ಲಿ ಬಿಗಿ ಬಂದೋಬಸ್ತ್

<><*<><>*><>

ದೇಶದಲ್ಲಿ ಎರಡನೇ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಾಳೆ ಸಂಜೆ ೫ ಗಂಟೆಗೆ ತೆರೆ ಬೀಳಲಿದೆ. ೧೩ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶದ ೮೯ ಲೋಕಸಭಾ ಕ್ಷೇತ್ರಗಳಿಗೆ ೨ನೇ ಹಂತದಲ್ಲಿ ಮತದಾನ ನಡೆಯಲಿದೆ. ರಾಜ್ಯದಲ್ಲಿಯೂ ಮೊದಲ ಹಂತದ ಚುನಾವಣೆ ಶುಕ್ರವಾರ ನಡೆಯಲಿದೆ. ೧೪ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ಅದೃಷ್ಟ ಪರೀಕ್ಷೆ ನಡೆಸಲಿದ್ದಾರೆ. ಮೊದಲ ಹಂತದಲ್ಲಿ ಉಡುಪಿ-ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು, ದಕ್ಷಿಣ ಬೆಂಗಳೂರು ಕೇಂದ್ರ, ಚಿಕ್ಕಬಳ್ಳಾಪುರ ಮತ್ತು ಕೋಲಾರ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

<><*<><>*><>

ಚಿತ್ರದುರ್ಗದಲ್ಲಿ ನ್ಯಾಯ ಸಂಕಲ್ಪ ಸಮಾವೇಶದಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ತಮ್ಮ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ನಡೆಸಿದರು. ಪ್ರಿಯಾಂಕಾ ಗಾಂಧಿ ಮಾತನಾಡಿ, ದೇಶದಲ್ಲಿ ಚಿನ್ನ, ಬೆಳ್ಳಿ, ಪೆಟ್ರೋಲ್ ಬೆಲೆ ಹೆಚ್ಚಾಗಿದ್ದು, ಬಡವರು ಬೆಲೆ ಏರಿಕೆಯಿಂದ ತತ್ತರಿಸಿದ್ದಾರೆ. ದೇಶದಲ್ಲಿ ನಿರುದ್ಯೋಗ ತಾಂಡವವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಮಾವೇಶದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದಲ್ಲಿ ನರೇಂದ್ರ ಮೋದಿ ಅಲೆ ಎಲ್ಲೂ ಇಲ್ಲ. ಅವರು ನೀಡಿದ ಭರವಸೆಗಳು ಒಂದು ಈಡೇರಿಲ್ಲ ಎಂದು ಟೀಕಿಸಿದರು. ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಇಂದು ರಾಜ್ಯಕ್ಕೆ ಆಗಮಿಸಲಿದ್ದು, ಬೆಂಗಳೂರಿನಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ರೋಡ್ ಶೋ ಮೂಲಕ ಪ್ರಚಾರ ನಡೆಸಲಿದ್ದಾರೆ. ರಾಜ್ಯ ಸರ್ಕಾರದ ಅಧಿಕಾರ ದುರುಪಯೋಗ ಪರಾಮವಧಿ ತಲುಪಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ. ಚುನಾವಣಾ ನೀತಿ ಸಂಹಿತೆ ಆರಂಭವಾದ ಬಳಿಕ ಎರಡು-ಮೂರು ಬಾರಿ ವಿಧಾನಸೌಧ ದುರ್ಬಳಕೆಯಾಗಿದೆ ಎಂದು ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮಾತನಾಡಿ, ರಾಜ್ಯದಲ್ಲಿ ಮಹಿಳೆಯರಿಗೆ ರಕ್ಷಣೆಯೇ ಇಲ್ಲ ಎಂದು ಕಳವಳ ವ್ಯಕ್ತಪಡಿಸಿದರು. ನೇಹಾ ಸಾವು ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಆಗ್ರಹಿಸಿದ್ದಾರೆ.

<><*<><>*><>

ರಾಜ್ಯದ ೧೪ ಕ್ಷೇತ್ರಗಳಲ್ಲಿ ೨ನೇ ಹಂತದ ಚುನಾವಣೆಗೂ ಅಖಾಡ ಸಿದ್ಧವಾಗಿದೆ. ಮೇ ೭ ರಂದು ಚುನಾವಣೆ ಎದುರಿಸಲಿರುವ ಉತ್ತರ ಕರ್ನಾಟಕದ ೧೪ ಕ್ಷೇತ್ರಗಳಲ್ಲಿ ಅಂತಿಮವಾಗಿ ೨೨೭ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಒಟ್ಟು ೪೫ ಮಂದಿ ಅಭ್ಯರ್ಥಿಗಳು ನಾಮಪತ್ರ ವಾಪಸ್ ಪಡೆದಿದ್ದಾರೆ. ೧೯ ನಾಮಪತ್ರಗಳು ಈಗಾಗಲೇ ತಿರಸ್ಕೃತಗೊಂಡಿವೆ. ೨೦೬ ಪುರುಷರು, ೨೧ ಮಹಿಳಾ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂದರೆ ೩೦ ಅಭ್ಯರ್ಥಿಗಳು ತಮ್ಮ ಅದೃಷ್ಟ ಪರೀಕ್ಷಿಸಿಲಿದ್ದಾರೆ. ಚಿಕ್ಕೋಡಿಯಲ್ಲಿ ೧೮, ಬೆಳಗಾವಿಯಲ್ಲಿ ೧೩, ಬಾಗಲಕೋಟೆಯಲ್ಲಿ ೨೨, ವಿಜಯಪುರದಲ್ಲಿ ೮, ಕಲಬುರಗಿ ೧೪, ರಾಯಚೂರು ೮, ಬೀದರ್ ೧೮, ಕೊಪ್ಪಳ ೧೯, ಬಳ್ಳಾರಿ ೧೦, ಹಾವೇರಿ ೧೪, ಧಾರವಾಡದಲ್ಲಿ ೧೭, ಉತ್ತರಕನ್ನಡ ೧೩, ದಾವಣಗೆರೆ ೩೦, ಶಿವಮೊಗ್ಗ ೨೩ ಮಂದಿ ಅಖಾಡದಲ್ಲಿ ಉಳಿದಿದ್ದಾರೆ.

<><*<><>*><>

ರಾಜ್ಯದಲ್ಲಿ ಚುನಾವಣಾ ಪ್ರಚಾರ ಬಿರುಸಿನಿಂದ ಕೂಡಿದ್ದು, ಅಭ್ಯರ್ಥಿಗಳು ಮತದಾರರ ಮನವೊಲಿಸುವಲ್ಲಿ ನಿರತರಾಗಿದ್ದಾರೆ. ಈ ನಡುವೆ ಆಯೋಗ ಮತದಾಣ ಹೆಚ್ಚಳಕ್ಕೆ ಅನೇಕ ಕ್ರಮಗಳನ್ನು ಕೈಗೊಂಡಿದೆ. ಕೋಲಾರ ಲೋಕಸಭಾ ಚುನಾವಣೆ ಹಿನ್ನೆಲೆ ಕೆ.ಜಿ.ಎಫ್ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಕೆ.ಜಿ.ಎಫ್. ನಗರದ ಸಮೀಪದ ಪಾರಾಂಡಹಳ್ಳಿಯಲ್ಲಿ 'ನಮ್ಮ ನಡೆ ಮತಗಟ್ಟೆಯ ಕಡೆ' ಜಾಗೃತಿ ಕಾರ್ಯಕ್ರಮಕ್ಕೆ ಕೆ.ಜಿ.ಎಫ್. ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಸೋಮಶೇಖರ್ ಚಾಲನೆ ನೀಡಿದರು. ಹಾಸನ ಲೋಕಸಭಾ ಕ್ಷೇತ್ರಕ್ಕೆ ಇದೇ ೨೬ ರಂದು ನಡೆಯಲಿರುವ ಚುನಾವಣೆಗೆ ಮತದಾನಕ್ಕೆ ಅಗತ್ಯ ಇರುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಸಿ.ಸತ್ಯಭಾಮ ತಿಳಿಸಿದ್ದಾರೆ. ಬೆಳಿಗ್ಗೆ ೭ ಗಂಟೆಯಿಂದ ಸಂಜೆ ೬ ರ ವರೆಗೆ ಮತದಾನ ನಡೆಯಲಿದ್ದು ಮತಗಟ್ಟೆಗಳಿಗೆ ಅಗತ್ಯ ಇರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಿದ್ಧತೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಚುನಾವಣಾ ಅಕ್ರಮಗಳನ್ನು ತಡೆಯಲು ಸಿ-ವಿಜಿಲ್ ಆಪ್ ಸಾರ್ವಜನಿಕರಿಗೆ ಪ್ರಯೋಜನಕಾರಿಯಾಗಿದೆ ಎಂದು ವಿಜಯಪುರ ಜಿಲ್ಲಾ ಚುನಾವಣಾಧಿಕಾರಿ ಎಂ.ಎಸ್.ದಿವಾಕರ ತಿಳಿಸಿದ್ದಾರೆ. ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಒಟ್ಟು ೨೦ ಲಕ್ಷದ ೯೨ ಸಾವಿರದ ೨೨೨ ಮತದಾರರಿದ್ದು ಈ ಪೈಕಿ ಪುರುಷರು ೧೦ ಲಕ್ಷದ ೨೬ ಸಾವಿರದ ೩೨೪, ಮಹಿಳೆಯರು ೧೦ ಲಕ್ಷ ೬೫ ಸಾವಿರದ ೭೧೪, ಇತರರು ೧೮೪

ಮತದಾರರಿದ್ದಾರೆ ಎಂದು ಮೈಸೂರು ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ. ರಾಜೇಂದ್ರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ಹಾಗೂ ಸುರಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾದ್ಯಂತ ಸ್ವೀಪ್ ಸಮಿತಿಯಿಂದ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗರಿಮಾ ಪನ್ವಾರ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಗರಿಮಾ ಪನ್ವಾರ್**

ಭಾರತ ದೊಡ್ಡ ಪ್ರಜಾ ಪ್ರಭುತ್ವ ದೇಶವಾಗಿದ್ದು, ಪ್ರತಿಯೊಬ್ಬರು ತಮ್ಮ ಮತವನ್ನು ಕಡ್ಡಾಯವಾಗಿ ಚಲಾಯಿಸಬೇಕು ಎಂದು ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್ ಹೊಸಮನಿ ತಿಳಿಸಿದರು. ಗದಗ ಜಿಲ್ಲೆಯ ಶಿವಾನಂದ ಕಲ್ಯಾಣ ಮಂಟಪದಲ್ಲಿ ನಡೆದ ವಿವಾಹ ಸಮಾರಂಭಕ್ಕೆ ಬಂದ ಅತಿಥಿಗಳಿಗೆ ಮತದಾನ ಮಾಡುವಂತೆ ರೋಣ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಕೆ ಇನಾಮದಾರ ಜಾಗೃತಿ ಮೂಡಿಸಿದರು.  ಬಾಗಲಕೋಟೆ ಜಿಲ್ಲೆಯಲ್ಲಿ ಮೇ ೭ ರಂದು ನಡೆಯಲಿರುವ ಚುನಾವಣೆಗೆ ನರಗುಂದ ಮತಕ್ಷೇತ್ರ ಸೇರಿದಂತೆ ಒಟ್ಟು ೧೮ ಲಕ್ಷದ ೬ ಸಾವಿರದ ೧೮೩ ಮತದಾರರು ಮತ ಚಲಾಯಿಸುವ ಹಕ್ಕನ್ನು ಪಡೆದುಕೊಂಡಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ಚುನಾವಣಾ ಸಿಬ್ಬಂದಿಗೆ ಮೂಲಭೂತ ವ್ಯವಸ್ಥೆಗಳನ್ನು ವ್ಯವಸ್ಥಿತವಾಗಿ ಕಲ್ಪಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಡಾ.ಕುಮಾರ್ ಅಧಿಕಾರಿಗಳಿಗೆ ಸೂಚಿಸಿದರು. ಚಿತ್ರದುರ್ಗದಲ್ಲಿ ಲೋಕಸಭಾ ಚುನಾವಣೆ ಕಾರ್ಯಗಳಿಗೆ ಒಟ್ಟು ೨೯೯ ವಾಹನಗಳನ್ನು ನಿಯೋಜಿಸಲಾಗಿದೆ. ಪ್ರತಿ ವಾಹನಗಳು ತೆರಳುವ ಮಾರ್ಗದ ಬಗ್ಗೆ ನಾಮಫಲಕಗಳನ್ನು ಹಾಕಬೇಕು. ಈ ಕಾರ್ಯದಲ್ಲಿ ಯಾವುದೇ ರೀತಿಯ ವ್ಯತ್ಯಾಸವಾಗದಂತೆ ಉಸ್ತುವಾರಿ ನೋಡಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ಲೋಕಸಭಾ ಚುನಾವಣಾ ಮತದಾನ ಹಾಗೂ ಮತ ಎಣಿಕಾ ಕಾರ್ಯ ನಡೆಯುವ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಿನ್ನಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ನಾಳೆ ಸಂಜೆ ೬ ಗಂಟೆಯಿಂದ ಇದೇ ೨೬ರ ಮಧ್ಯರಾತ್ರಿ ೧೨ ಗಂಟೆಯವರೆಗೆ ಮದ್ಯದ ಅಂಗಡಿಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿ ಮುಲ್ಲೈಮುಗಿಲನ್ ಆದೇಶ ಹೊರಡಿಸಿದ್ದಾರೆ. ಈ ನಡುವೆ ಮಂಗಳೂರು ಮೀನುಗಾರಿಕಾ ಬಂದರಿನಲ್ಲಿ ಇಂದು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ  ಮತದಾನ ಜಾಗೃತಿ ನಡೆಯಿತು. ಬೆಂಗಳೂರು ಲೋಕಸಭಾ ಚುನಾವಣೆಯ ಅಂತಿಮ ಹಂತದ ಸಿದ್ಧತೆ ಕುರಿತು ಸಾಮಾನ್ಯ ವೀಕ್ಷಕರು, ಚುನಾವಣಾ ವೆಚ್ಚ ವೀಕ್ಷಕರ ಸಮ್ಮುಖದಲ್ಲಿ ಇಂದು ಮಲ್ಲೇಶ್ವರಂ ಐಪಿಪಿ ತರಬೇತಿ ಕೇಂದ್ರದಲ್ಲಿ ಹಿರಿಯ ಅಧಿಕಾರಿಗಳ ಜೊತೆ ಜಿಲ್ಲಾ ಚುನಾವಣಾ ಅಧಿಕಾರಿ ತುಷಾರ್ ಗಿರಿನಾಥ್ ಮಹತ್ವದ ಸಭೆ ನಡೆಸಿದರು. ಚಿಕ್ಕಮಗಳೂರು ಜಿಲ್ಲೆಯ ಪ್ರವಾಸಿ ತಾಣಗಳಾದ ಬಾಬಾ ಬುಡನ್ ಗಿರಿ ಹಾಗೂ ಸೀತಾಳಯ್ಯನ ಗಿರಿಯಲ್ಲಿ ಮತದಾನದ ಮಹತ್ವದ ಕುರಿತು ಜಿಲ್ಲಾ ಸ್ವೀಪ್ ಸಮಿತಿ  ಸ್ವಚ್ಛತಾ ಕಾರ್ಯಕ್ರಮದ ಮೂಲಕ ಜಾಗೃತಿ ಮೂಡಿಸಿತು.  ಬೆಳಗಾವಿ ಜಿಲ್ಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಸ್ವೀಪ್ ಸಮಿತಿ ಬೋಟಿಂಗ್ ಮುಖಾಂತರ ಮತದಾನ ಜಾಗೃತಿ ನಡೆಸಿತು. ಚುನಾವಣಾಧಿಕಾರಿ  ನಿತೇಶ್ ಪಾಟೀಲ್ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ  ಚಾಲನೆ ನೀಡಿದರು. ಭಾರತ ಚುನಾವಣಾ ಆಯೋಗದ ನಿರ್ದೇಶನಗಳನ್ನು ಪಾಲಿಸುವುದು ಕಡ್ಡಾಯವಾಗಿದೆ ಎಂದು ವಿಜಯಪುರ ಮೀಸಲು ಲೋಕಸಭಾ ಚುನಾವಣೆಯ ಸಾಮಾನ್ಯ ವೀಕ್ಷಕ ಡಾ. ರತನ್‌ಕನ್ವರ್ ಗಡವಿಚರಣ ಸೂಚಿಸಿದರು.

**<><*<><>*><>**

ಈಗ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಚಂದ್ರಶೇಖರ್ ಎನ್.

ರಾಜ್ಯದ ೨೮ ಲೋಕಸಭಾ ಕ್ಷೇತ್ರಗಳ ಪೈಕಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರವೂ ಪ್ರತಿಷ್ಠಿತ ಕ್ಷೇತ್ರವಾಗಿದೆ. ಈಗಾಗಲೇ ಪ್ರಧಾನಿ ನರೇಂದ್ರ ಮೋದಿಯವರೇ ಖುದ್ದು ಚಿಕ್ಕಬಳ್ಳಾಪುರಕ್ಕೆ ಭೇಟಿ ನೀಡಿ ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ನಡೆಸಿದ್ದಾರೆ. ಕಾಂಗ್ರೆಸ್ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಚಾರ ನಡೆಸಿದ್ದಾರೆ. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ೮ ವಿಧಾನಸಭಾ ಕ್ಷೇತ್ರಗಳಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯ. ೩, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೪ ಹಾಗೂ ಬೆಂಗಳೂರು ನಗರ ಜಿಲ್ಲೆಯ ಒಂದು ವಿಧಾನಸಭಾ ಕ್ಷೇತ್ರವಿದೆ.  ಈ ಎಂಟು ವಿಧಾನಸಭಾ ಕ್ಷೇತ್ರಗಳ ಪೈಕಿ ಐದು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರು, ಎರಡು ಕ್ಷೇತ್ರಗಳಲ್ಲಿ ಬಿಜೆಪಿ ಶಾಸಕರು ಹಾಗೂ ಒಂದು ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಬೆಂಬಲ ನೀಡಿರುವ ಪಕ್ಷೇತರ ಶಾಸಕರಿದ್ದಾರೆ. ಕ್ಷೇತ್ರದಲ್ಲಿ ಒಟ್ಟು ೧೯ ಲಕ್ಷದ ೮೧ ಸಾವಿರದ ೩೪೭ ಮತದಾರರಿದ್ದು, ಇದರಲ್ಲಿ ೯ ಲಕ್ಷದ ೮೩ ಸಾವಿರದ ೭೭೫ ಪುರುಷರು ಮತ್ತು ೯ ಲಕ್ಷದ ೯೭ ಸಾವಿರದ ೩೦೬ ಮಹಿಳಾ ಮತದಾರರು ಹಾಗೂ ೨೬೬ ಇತರೆ ಮತದಾರರಿದ್ದಾರೆ. ೨೦೧೯ರ ಲೋಕಸಭಾ ಚುನಾವಣೆಯಲ್ಲಿ ಶೇಕಡ ೭೮.೭೬ ರಷ್ಟು ಮತದಾನವಾಗಿತ್ತು. ಈ ಬಾರಿ ಮತದಾನದ ಪ್ರಮಾಣವನ್ನು ಗಣನೀಯವಾಗಿ ಹೆಚ್ಚಿಸಲು ಚುನಾವಣಾ ಆಯೋಗದ ಸ್ಥಳೀಯ ಸ್ವೀಪ್ ಸಮಿತಿ ಮತದಾನ ಜಾಗೃತಿಯ ಹಲವು ಕಾರ್ಯಕ್ರಮಗಳನ್ನು ಕ್ಷೇತ್ರದಾದ್ಯಂತ ಹಮ್ಮಿಕೊಳ್ಳುತ್ತಿದೆ. ಈ ಕ್ಷೇತ್ರದಲ್ಲಿ ಈವರೆಗೆ ನಡೆದ ಒಟ್ಟು ೧೨ ಚುನಾವಣೆಗಳಲ್ಲಿ ೧೦ ರಲ್ಲಿ ಕಾಂಗ್ರೆಸ್ ಪ್ರಾಬಲ್ಯ ಸಾಧಿಸಿದೆ. ಒಮ್ಮೆ ಜೆಡಿಎಸ್ ಹಾಗೂ ೨೦೧೯ ರ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಿದೆ. ಬಿಜೆಪಿ ವಶವಾಗಿರುವ ಕ್ಷೇತ್ರವನ್ನು ಮತ್ತೆ ತನ್ನ ವಶಕ್ಕೆ ಪಡೆಯಲು ಕಾಂಗ್ರೆಸ್ ಶತಪ್ರಯತ್ನ ಮಾಡುತ್ತಿದೆ. ಇನ್ನೊಂದೆಡೆ ಕ್ಷೇತ್ರವನ್ನು ಉಳಿಸಿಕೊಂಡು ಹಾಗೇ ಮುಂದುವರೆಯಲು ಬಿಜೆಪಿ ಇನ್ನಿಲ್ಲದ ಪ್ರಯತ್ನಗಳನ್ನು ಮಾಡುತ್ತಿದೆ. ಒಟ್ಟು ೨೭ ಅಭ್ಯರ್ಥಿಗಳು ಅಂತಿಮವಾಗಿ ಚುನಾವಣಾ ಕಣದಲ್ಲಿದ್ದಾರೆ. ಇದರಲ್ಲಿ ಕಾಂಗ್ರೆಸ್ ನ ರಕ್ಷಾ ರಾಮಯ್ಯ ಹಾಗೂ ಬಿಜೆಪಿಯ ಡಾ.ಕೆ.ಸುಧಾಕರ್ ನಡುವೆ ಜಿದ್ದಾಜಿದ್ದಿನ ಮತ್ತು ಪ್ರಬಲ ಪೈಪೋಟಿ ಏರ್ಪಟ್ಟಿದೆ. ಎಂಬಿಬಿಎಸ್ ಪದವೀಧರರಾಗಿರುವ ಬಿಜೆಪಿ ಅಭ್ಯರ್ಥಿ ಡಾ.ಕೆ.ಸುಧಾಕರ್ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಮೂರು ಬಾರಿ ಶಾಸಕರಾದ ಅನುಭವದ ಜೊತೆಗೆ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ವೈದ್ಯಕೀಯ ಮತ್ತು ಆರೋಗ್ಯ ಸಚಿವರಾಗಿಯೂ ಕೆಲಸ

ಮಾಡಿದ್ದಾರೆ. ಇವರು ಸ್ಥಳೀಯರೂ ಆಗಿರುವುದು ವಿಶೇಷ. ಇನ್ನು ಕಾಂಗ್ರೆಸ್ ಅಭ್ಯರ್ಥಿ  ರಕ್ಷಾ ರಾಮಯ್ಯ ವಿದೇಶದಲ್ಲಿ ಎಂಬಿಎ ಪದವಿ ಪಡೆದ ಯುವ ಅಭ್ಯರ್ಥಿಯೂ ಆಗಿದ್ದು, ಬೆಂಗಳೂರಿನ ಪ್ರತಿಷ್ಠಿತ ಎಂ.ಎಸ್.ರಾಮಯ್ಯ ಸಮೂಹ ಶಿಕ್ಷಣ ಸಂಸ್ಥೆಗಳ ಕುಟುಂಬದ ಹಿನ್ನೆಲೆಯೂ ಇದೆ. ಇವರು ಯುವ ಕಾಂಗ್ರೆಸ್ ನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯೂ ಆಗಿ ಕೆಲಸ ಮಾಡಿದ್ದಾರೆ. ಇದನ್ನು ಹೊರತುಪಡಿಸಿದರೆ ಇವರಿಗೆ ಯಾವುದೇ ರಾಜಕೀಯ ಅನುಭವವಿಲ್ಲ.  ಕಾಂಗ್ರೆಸ್, ಬಿಜೆಪಿ ನಡುವೆ ಪ್ರಬಲ ಪೈಪೋಟಿ ಇದ್ದು, ಕ್ಷೇತ್ರದಲ್ಲಿ ಸಿಪಿಐಎಂ, ಬಿಎಸ್‌ಪಿ ಪಕ್ಷಗಳ ಅಭ್ಯರ್ಥಿಗಳ ಜೊತೆಗೆ ಪಕ್ಷೇತರರೂ ಇದ್ದಾರೆ. ಇದೇ ೨೬ ರಂದು ೨ ಸಾವಿರದ ೩೨೬ ಮತಗಟ್ಟೆಗಳಲ್ಲಿ ಮತದಾನ ನಡೆಯಲಿದೆ.

**<><*<><>*><>**

ಬೆಂಗಳೂರಿನಲ್ಲಿ ಐತಿಹಾಸಿಕ ಹೂವಿನ ಕರಗಕ್ಕೆ ಕ್ಷಣಗಣನೆ ಆರಂಭವಾಗಿದೆ. ಪ್ರಸಿದ್ಧ ದ್ರೌಪದಿ ದೇವಿ ಕರಗ ಶಕ್ತ್ಯೋತ್ಸವ ತಡರಾತ್ರಿ ಧರ್ಮರಾಯ ಸ್ವಾಮಿ ದೇವಸ್ಥಾನದಿಂದ ಹೊರಡಲಿದೆ. ಬಳಿಕ ಗಣಪತಿ ಮತ್ತು ಮುತ್ಯಾಲಮ್ಮ ದೇವಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಕೆ.ಆರ್. ಮಾರುಕಟ್ಟೆ ತಲುಪಲಿದೆ. ಮಸ್ತಾನ್‌ಸಾಬ್ ದರ್ಗಾಕ್ಕೆ ಭೇಟಿ ನೀಡಿ, ಅಲ್ಲಿಂದ ಬಳೆಪೇಟೆ, ಕುಂಬಾರಪೇಟೆ, ಗೊಲ್ಲರಪೇಟೆ, ತಿಗಳರಪೇಟೆಗಳಲ್ಲಿ ಕರಗ ಮೆರವಣಿಗೆ ಸಾಗಲಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಈ ಬಾರಿ ಸುಮಾರು ೩ ಸಾವಿರ ವೀರ ಕುಮಾರರು ಕರಗದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಈ ಬಾರಿಯು ಪೂಜಾರಿ ಜ್ಞಾನೇಂದ್ರ ಕರಗ ಹೊರಲಿದ್ದಾರೆ. ಕಳೆದ ರಾತ್ರಿ ಸಂಪಂಗಿ ಕೆರೆಯ ಶಕ್ತಿಪೀಠದಲ್ಲಿ ಹಸಿಕರಗದ ಪೂಜಾವಿಧಿವಿಧಾನಗಳು ನಡೆದವು. ಬಳಿಕ ಹಸಿಕರಗ ಮೆರವಣಿಗೆ ಮೂಲಕ ಧರ್ಮರಾಯಸ್ವಾಮಿ ದೇವಾಲಯ ತಲುಪಿದೆ.

**<><*<><>*><>**

ಮಳೆಗಾಲದಲ್ಲಿ ಮಳೆ ನೀರು ಒಳಚರಂಡಿಗಳಿಗೆ ಸೇರ್ಪಡೆಯಾಗದಂತೆ ಅಗತ್ಯ ಮುಂಜಾಗ್ರತೆ ವಹಿಸುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ಡಾ. ರಾಮಪ್ರಸಾದ್ ಮನೋಹರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅನಧಿಕೃತವಾಗಿ ಮಳೆ ನೀರನ್ನು ಒಳಚರಂಡಿ ಕೊಳವೆ ಮಾರ್ಗಗಳಿಗೆ ಹರಿಯ ಬಿಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆದೇಶ ನೀಡಿದ್ದಾರೆ. ಮ್ಯಾನ್‌ಹೋಲ್‌ಗಳ ಕವರ್‌ಗಳನ್ನು ತೆರೆಯದಂತೆಯೂ ನಾಗರಿಕರಿಗೆ ಸೂಚಿಸಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ.ಎನ್ ಅನುರಾಧ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ದೂರವಾಣಿ ಸಂಖ್ಯೆ ೦೮೦-೨೨೨೨೧೦೫೦ ಗೆ ಕರೆ ಮಾಡಿ ಸಮಸ್ಯೆಯನ್ನು ತಿಳಿಸಬಹುದು ಎಂದು ಹೇಳಿದ್ದಾರೆ. ಮುಂಗಾರು ಆರಂಭ ಆಗುವವರೆಗೆ ಗದಗ ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚನೆ ನೀಡಿದ್ದಾರೆ.  ಜಾನುವಾರುಗಳಿಗೆ ಮೇವನ್ನು ಸರಿಯಾಗಿ ಪೂರೈಸಬೇಕು. ಮೇವು ಕೊರತೆಯಾಗದಂತೆ ದಾಸ್ತಾನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನಿರ್ದೇಶನ ನೀಡಿದರು.

**<><*<><>*><>**

ಕೊಡಗು  ಜಿಲ್ಲೆಯ ನಾಪೋಕ್ಲು ಗ್ರಾಮದಲ್ಲಿ ೨೩ ದಿನಗಳಿಂದ  ನಡೆಯುತ್ತಿರುವ ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿ ಅಂತಿಮ ಹಂತಕ್ಕೆ ತಲುಪಿದೆ.  ಇದೇ ೨೭ ರ ಶನಿವಾರದಂದು ನಾಪೋಕ್ಲು ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ಕೊಡವ ಕೌಟುಂಬಿಕ ಹಾಕಿ ಪಂದ್ಯಾಟದ ಸೆಮಿಫೈನಲ್ ನಡೆಯಲಿದೆ. ಇದೇ ೨೯ ರಂದು ೨೪ ನೇ ವರ್ಷದ ಕೊಡವ ಹಾಕಿ ಚಾಂಪಿಯನ್ ಪಟ್ಟಕ್ಕಾಗಿ ಫೈನಲ್ ಪಂದ್ಯಾಟ ನಡೆಯಲಿದೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯಾದ್ಯಂತ ಒಣಹವೆ ಮುಂದುವರಿದಿದೆ. ರಾಜ್ಯದಲ್ಲಿ ಅತೀ ಗರಿಷ್ಠ ಉಷ್ಣಾಂಶ ೪೧.೩ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಉತ್ತರ ಒಳನಾಡಿನ ಕೆಲವು ಕಡೆಗಳಲ್ಲಿ ಮತ್ತು ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**